**<u>ಅಸಲು ದಾವಾ ಸಂಖ್ಯೆ: 137/2018</u>** ಡಿ.ಡಬ್ಲ್ಯೂ.:- **1**

ದಿನಾಂಕ: **16-04-2025** ರಂದು ಸಾಕ್ಷಿಯು ನ್ಯಾಯಾಲಯಕ್ಕೆ ಹಾಜರಾಗಿದ್ದು ಪ್ರಮಾಣ ವಚನ ಬೋಧಿಸಲಾಯಿತು.

<u>ಪಾಟೀ ಸವಾಲು:- ವಾದಿ ಪರ ವಕೀಲರಿಂದ:-</u>

ನಾನು ಮೂಲತಃ ಮಾದನಬಾವಿ ಗ್ರಾಮದ ವಾಸಿ. ವಾದಿ ಯಾವ ಗ್ರಾಮದಲ್ಲಿ ವಾಸವಾಗಿದ್ದಾರೆ ಎಂದು ನನಗೆ ಗೊತ್ತಿಲ್ಲ. ವಾದಿಯ ತಂದೆಯ ಹೆಸರು ದೊಡ್ಡಪ್ಪ ಎಂದರೆ ನನಗೆ ಗೊತ್ತಿಲ್ಲ. ವಾದಿಯು ಭಾಗಾಂಶ ಕೋರಿ ನನ್ನ ವಿರುದ್ಧ 2018 ನೇ ಸಾಲಿನಲ್ಲಿ ದಾವೆಯನ್ನು ಸಲ್ಲಿಸಿದ್ದರು ಎಂದರೆ ಸರಿ. ಸಾಕ್ಷಿಗೆ ಪ್ರತಿವಾದ ಪತ್ರದಲ್ಲಿ ನಮೂದಾಗಿರುವ ವಿಚಾರಗಳು ಗೊತ್ತ ಎಂಬ ಪ್ರಶ್ನೆಗೆ ಸಾಕ್ಷಿಯು ಪ್ರತಿವಾದ ಪತ್ರದಲ್ಲಿ ಸಹಿಯನ್ನು ಮಾಡಿ ನಾವೇ ಸಲ್ಲಿಸಿದ್ದೇವೆ ಆದರೆ ಈಗ ಅದರಲ್ಲಿ ಏನು ಬರೆದಿದೆ ಎಂದು ನೆನಪಾಗುತ್ತಿಲ್ಲ ಎಂದು ನುಡಿಯುತ್ತಾರೆ. ದಾವಾ ಆಸ್ತಿಯ ಮೌಲ್ಯ ಈ ನ್ಯಾಯಾಲಯದ ವ್ಯಾಪ್ತಿಗೆ ಬರುವುದಿಲ್ಲ ಎಂದು ಈಗ್ಗೆ 2 ವರ್ಷಗಳ ಹಿಂದೆ ನಮಗೆ ತಿಳಿದಿರುತ್ತದೆ. ಸಾಕ್ಷಿಗೆ 2018 ನೇ ಸಾಲಿನಲ್ಲಿ ವಾದಿಯು ಈ ದಾವೆಯನ್ನು ಸಲ್ಲಿಸಿದ ನಂತರ ಮತ್ತು ನ್ಯಾಯಾಲಯದಿಂದ ಸಮನ್ಸ್ ಪಡೆದುಕೊಂಡು ಪ್ರತಿವಾದ ಪತ್ರವನ್ನು ಸಲ್ಲಿಸುವ ಸಮಯದಲ್ಲಿ ಈ ದಾವೆಯು ಈ ನ್ಯಾಯಾಲಯದ ವ್ಯಾಪ್ತಿಗೆ ಬರುವುದಿಲ್ಲ ಎಂಬ ವಿಚಾರ ನಿಮಗೆ ತಿಳಿಯಿತಾ ಎಂಬ ಪ್ರಶ್ನೆಗೆ ಸಾಕ್ಷಿಯು ಆ ಸಮಯದಲ್ಲಿ ನಮಗೆ ತಿಳಿದಿರಲಿಲ್ಲ ಮತ್ತು 2-3 ವರ್ಷಗಳ ನಂತರ ತಿಳಿಯಿತು ಎಂದು ನುಡಿಯುತ್ತಾರೆ. ಈ ದಾವೆಯು ನ್ಯಾಯಾಲಯದ ವ್ಯಾಪ್ತಿಗೆ ಬರುವುದಿಲ್ಲ ಎಂಬುದನ್ನು ಪ್ರಶ್ನೆ ಮಾಡುವ ಹಕ್ಕು ಪ್ರತಿವಾದಿ 9 ರಿಂದ 16 ರವರಿಗೆ ಮಾತ್ರ ಇದೆ ನನಗೆ ಯಾವುದೇ ಪ್ರಶ್ನೆ ಮಾಡುವ ಹಕ್ಕು ಇಲ್ಲ ಎಂದರೆ ಸರಿಯಲ್ಲ. ಸಾಕ್ಷಿಗೆ ದಾವಾ ಆಸ್ತಿಗಳಲ್ಲಿ ಯಾವ ಯಾವ ಬೆಳೆಯನ್ನು ಬೆಳೆಯುತ್ತಿದ್ದಾರೆ ಮತ್ತು ಅದರ ಮೌಲ್ಯದ ಬಗ್ಗೆ ದಾಖಲಾತಿಗಳನ್ನು ಹಾಜರುಪಡಿಸಿದ್ದೀರಾ ಎಂಬ ಪ್ರಶ್ನೆಗೆ ಸಾಕ್ಷಿಯು ಉಪನೋಂದಣಾಧಿಕಾರಿಯವರು ನೀಡಿದ ದಾಖಲೆಯನ್ನು ಹಾಜರುಪಡಿಸಿದ್ದೇನೆ ಎಂದು ನುಡಿಯುತ್ತಾರೆ. ಸಾಕ್ಷಿಗೆ ನಿಮ್ಮ ಪ್ರತಿವಾದ ಪತ್ರದಲ್ಲಿ ದಾವಾ ಆಸ್ತಿಗಳ ಮೌಲ್ಯ ರೂ.50,00,000/- ಇರುತ್ತದೆ ಎಂದು ನಮೂದು ಮಾಡಿದ್ದೀರಿ ಆದರೆ ಅದಕ್ಕೆ ಸಂಬಂಧಿಪಟ್ಟ ದಾಖಲಾತಿಗಳನ್ನು ಹಾಜರುಪಡಿಸಿಲ್ಲ ಎಂದರೆ ಸಾಕ್ಷಿಯು ಹಾಜರುಪಡಿಸಿದ್ದೇನೆ ಎಂದು

ನುಡಿಯುತ್ತಾರೆ. ವಾದಿಯು ಸಲ್ಲಿಸಿದ ದಾವೆ ಮೌಲ್ಯ ಪತ್ರವು ಸರಿಯಾಗಿದೆ ಎಂದರೆ ಸರಿಯಲ್ಲ. ದಾವಾ ಆಸ್ತಿಯಲ್ಲಿ ವಾದಿಗೆ ಆಸ್ತಿ ಕೊಡಬೇಕಾಗುತ್ತದೆ ಎಂಬ ಉದ್ದೇಶದಿಂದ ಸುಳ್ಳು ಪ್ರತಿವಾದ ಪತ್ರ ಸಲ್ಲಿಸಿ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

ಮರುವಿಚಾರಣೆ ಇಲ್ಲ.

ಸಾ. ಹೇ. ತೆ. ನ್ಯಾ. ಬೆ. ಮಾಡಿಸಲಾಯಿತು.

ಓ. ಹೇ. ಕೇ. ಸ. ಇದೆ.

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಹೊನ್ನಾಳಿ.